# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1104
ಉತ್ತರಿಸಬೇಕಾದ ದಿನಾಂಕ : 15.12.2023
ಸದಸ್ಯರ ಹೆಸರು : ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ಸಚಿವರು : ಮಾನ್ಯ ಪರಿಶಿಷ್ಟ ಪಂಗಡಗಳ ಕಲ್ಯಾಣ, ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆಯಲ್ಲಿ ಎಲ್ಲಾ ತಾಲ್ಲೂಕುಗಳಲ್ಲಿ ಕ್ರೀಡಾಂಗಣ ಕಟ್ಟಡಗಳ ನಿರ್ಮಾಣ ಮಾಡಲು ಮೀಸಲಿಟ್ಟಿರುವ ಅನುದಾನವೆಷ್ಟು; | ಅನುದಾನದ ಕೊರತೆಯಿಂದಾಗಿ ಪ್ರಸಕ್ತ ಸಾಲಿನಲ್ಲಿ ಬೀದರ್ ಜಿಲ್ಲೆಯ ತಾಲ್ಲೂಕುಗಳಲ್ಲಿ ಕ್ರೀಡಾಂಗಣ ಕಟ್ಟಡ ನಿರ್ಮಾಣ ಮಾಡಲು ಯಾವುದೇ ಅನುದಾನ ಮೀಸಲಿಟ್ಟಿರುವುದಿಲ್ಲ. |
| ಆ) | ಬೀದರ್ ಜಿಲ್ಲೆಯಲ್ಲಿ ಎಲ್ಲಾ ತಾಲ್ಲೂಕುಗಳಲ್ಲಿ ಕ್ರೀಡಾಂಗಣ ನಿರ್ಮಾಣ ಮಾಡಲಾಗಿದೆಯೇ; (ವಿವರ ನೀಡುವುದು) | 1. ಬೀದರ್ ಜಿಲ್ಲೆಯ ಬೀದರ್ ನಲ್ಲಿ 400ಮೀ. ಮಣ್ಣಿನ ಓಟದ ಅಂಕಣ, ವಾಲಿಬಾಲ್, ಬಾಸ್ಕೆಟ್ ಬಾಲ್, ಕಬಡ್ಡಿ ಮತ್ತು ಇನ್ನಿತರೆ ಅಂಕಣಗಳು, ಪ್ರೇಕ್ಷಕರ ಗ್ಯಾಲರಿ ಒಳಗೊಂಡ ಜಿಲ್ಲಾ ಕ್ರೀಡಾಂಗಣ, ಒಳಾಂಗಣ ಕ್ರೀಡಾಂಗಣ, ಜಿಮ್ ಹಾಗೂ ಈಜುಕೊಳಗಳನ್ನು ನಿರ್ಮಾಣ ಮಾಡಲಾಗಿರುತ್ತದೆ.<br>2. ಬೀದರ್ ಜಿಲ್ಲೆಯ ಬಸವಕಲ್ಯಾಣ, ಔರಾದ್ ಹಾಗೂ ಹುಮ್ನಾಬಾದ್ ತಾಲ್ಲೂಕುಗಳಲ್ಲಿ, ತಾಲ್ಲೂಕು ಕ್ರೀಡಾಂಗಣ ನಿರ್ಮಾಣ ಮಾಡಲಾಗಿದೆ.<br>3. ಬೀದರ್ ಜಿಲ್ಲೆಯ ಹುಲಸೂರು, ಚಿಟಗುಪ್ಪಾ, ಕಮಲನಗರ ಹಾಗೂ ಭಾಲ್ಕಿ ತಾಲ್ಲೂಕುಗಳಲ್ಲಿ ಕ್ರೀಡಾಂಗಣಗಳು ಇರುವುದಿಲ್ಲ. |
| ಇ) | ಬೀದರ್ ಜಿಲ್ಲೆಯ ಜಿಲ್ಲಾ ನೆಹರು ಕ್ರೀಡಾಂಗಣ ಕಾಮಗಾರಿ ಪೂರ್ಣಗೊಳ್ಳದೆ ಇರುವುದಕ್ಕೆ ಕಾರಣವೇನು; ಮತ್ತು ಪೂರ್ಣಗೊಳ್ಳುವುದು ಯಾವಾಗ? (ಮಾಹಿತಿ ನೀಡುವುದು) | ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿವತಿಯಿಂದ ಜಿಲ್ಲಾ ಕ್ರೀಡಾಂಗಣ ನಿರ್ಮಾಣ ಕಾಮಗಾರಿಗೆ ರೂ 463.87 ಲಕ್ಷಗಳು ಬಿಡುಗಡೆಯಾಗಿದ್ದು, ಸದರಿ ಅನುದಾನದಲ್ಲಿ ಪ್ರೇಕ್ಷಕರ ಗ್ಯಾಲರಿ, ಆರ್.ಸಿ.ಸಿ. ಚರಂಡಿ, ಕ್ರೀಡಾಂಗಣದ ಸುತ್ತಲೂ ಚೈನ್ ಲಿಂಕ್ ಬೇಲಿ, ಪ್ರವೇಶ ದ್ವಾರ, ವಿವಿಧ ಕ್ರೀಡಾ ಅಂಕಣಗಳು, ರಸ್ತೆ ಮತ್ತು ಪಾರ್ಕಿಂಗ್ ಸೌಲಭ್ಯ, ನೈಸರ್ಗಿಕ ಹುಲ್ಲು ಹಾಸಿನ ಫುಟ್ಬಾಲ್ ಅಂಕಣ, ಮಕ್ಕಳ ಆಟದ ಮೈದಾನ, ಹಾಲಿಯಿರುವ ಕ್ರೀಡಾಂಗಣದ ಕಟ್ಟಡಕ್ಕೆ ಬಣ್ಣ ಬಳಿಯುವುದು ಹಾಗೂ ಎ.ಸಿ.ಪಿ. ಕ್ಲಾಡಿಂಗ್ ಅಳವಡಿಸುವುದು, ವಿದ್ಯುತ್ ಸರಬರಾಜು ವ್ಯವಸ್ಥೆ ಕಲ್ಪಿಸುವ ಕಾಮಗಾರಿಗಳನ್ನು ಕೈಗೊಂಡು, ಪೂರ್ಣಗೊಳಿಸಿ ಕ್ರೀಡಾಪಟುಗಳ ಬಳಕೆಗೆ ಒದಗಿಸಲಾಗಿರುತ್ತದೆ.<br><br>ಜಿಲ್ಲಾ ಕ್ರೀಡಾಂಗಣದ ಒಂದು ಭಾಗದಲ್ಲಿ ಐದು ಸ್ಟೆಪ್ಸ್‌ಗಳ ಗ್ಯಾಲರಿಯನ್ನು ರೂ 100.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕೆ.ಆರ್.ಐ.ಡಿ.ಎಲ್. ಬೀದರ್ ಜಿಲ್ಲೆ ಇವರು ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಿ, ಮೊದಲನೇ ಕಂತಿನಲ್ಲಿ ರೂ 75.00 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗಿತ್ತು. ಅನುದಾನದ ಕೊರತೆಯಿಂದಾಗಿ ಬಾಕಿ ರೂ 25.00 ಲಕ್ಷಗಳ ಅನುದಾನ ಬಿಡುಗಡೆಯಾಗದೇ ಇರುವುದರಿಂದ, ಸದರಿ ಕಾಮಗಾರಿಯು ಪೂರ್ಣಗೊಂಡಿರುವುದಿಲ್ಲ. ಈ ಕಾಮಗಾರಿಯನ್ನು ಪ್ರಸಕ್ತ ಸಾಲಿನಲ್ಲಿ ಪೂರ್ಣಗೊಳಿಸಲು ಉದ್ದೇಶಿಸಲಾಗಿದೆ. |

**ಸಂಖ್ಯೆ: ವೈಎಸ್‌ಡಿ-ಇಬಿಬಿ/97/2023**

**( ಬಿ. ನಾಗೇಂದ್ರ)**
ಪರಿಶಿಷ್ಟ ಪಂಗಡಗಳ ಕಲ್ಯಾಣ,
ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.